ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

ಇಲಾಖೆ / ವಿಷಯ: DEPARTMENT / SUBJECT: ಕರ್ನಾಟಕ ವಿಧಾನ ಸಭೆ ಸಚಿವಾಲಯ

ಪತ್ರಿಕೆಯ ಹೆಸರು : NAME OF THE NEWS PAPER : ವಿಜಯ ಕರ್ನಾಟಕ ದಿನಾಂಕ : DATE : 14/3/2019

# ಅಮಾನತು ಪ್ರಶ್ನಿಸಿದ್ದ ಮೂರ್ತಿ ಅರ್ಜಿ ತೀರ್ಪು ಕಾಯ್ದಿರಿಸಿದ ಹೈಕೋರ್ಟ್

■ ವಿಕ ಸುದ್ದಿಲೋಕ ಬೆಂಗಳೂರು 14/3/19

ಅಮಾನತುಗೊಳಿಸಿರುವ ವಿಧಾನಸಭೆ ವಿಶೇಷ ಮಂಡಳಿಯ ಕ್ರಮ ಪ್ರಶ್ನಿಸಿ ವಿಧಾನಸಭೆ ಕಾರ್ಯದರ್ಶಿ ಎಸ್. ಮೂರ್ತಿ ಸಲ್ಲಿಸಿದ್ದ ಅರ್ಜಿ ಕುರಿತಂತೆ ವಾದ-ಪ್ರತಿವಾದವನ್ನು ಆಲಿಸಿರುವ ಹೈಕೋರ್ಟ್, ತೀರ್ಪು ಕಾಯ್ದಿರಿಸಿದೆ.

ಅಮಾನತು ಆದೇಶ ರದ್ದು ಕೋರಿ ಎಸ್.ಮೂರ್ತಿ ಸಲ್ಲಿಸಿದ್ದ ಅರ್ಜಿ ವಿಚಾರಣೆಯನ್ನು ನ್ಯಾಯಮೂರ್ತಿ ಸುನೀಲ್ ದತ್ ಯಾದವ್ ಅವರಿದ್ದ ಪೀಠ ಬುಧವಾರ ಪೂರ್ಣಗೊಳಿಸಿತು.

ಅರ್ಜಿದಾರರ ಪರ ವಕೀಲರು "ಮೂರ್ತಿ ವಿರುದ್ಧದ ಆರೋಪಗಳಿಗೆ ವಿವರಣೆ ನೀಡಲು ಹಾಗೂ ವಿಚಾರಣೆಗೆ ಅವಕಾಶ ಕಲ್ಪಿಸಿಲ್ಲ. ಏಕಪಕ್ಷೀಯ ಅಮಾನತು ಆದೇಶ ಹೊರಡಿಸಲಾಗಿದೆ. ಇದು ನ್ಯಾಯಸಮ್ಮತವಾಗಿಲ್ಲ, ಸಹಜ ನ್ಯಾಯಕ್ಕೆ ವಿರುದ್ಧವಾಗಿದೆ" ಎಂದು ನ್ಯಾಯಪೀಠಕ್ಕೆ ತಿಳಿಸಿದರು.

ಆದರೆ ಸರಕಾರ, ಅರ್ಜಿದಾರರ ವಿರುದ್ಧದ ಆರೋಪಗಳು ಮೇಲ್ನೋಟಕ್ಕೆ ಸಾಬೀತಾಗಿರುವುದರಿಂದಲೇ ಅವರನ್ನು ಅಮಾನತು ಮಾಡಲಾಗಿದೆ ಎಂದು ವಾದಿಸಿದೆ.

2016 ಹಾಗೂ 2017ನೇ ಸಾಲಿನಲ್ಲಿ ಬೆಳಗಾವಿಯಲ್ಲಿ ನಡೆದ ಅಧಿವೇಶನ ಸಂಬಂಧ ಕೈಗೊಳ್ಳಲಾದ ಕಾಮಗಾರಿಗಳಲ್ಲಿ ಹಾಗೂ ಇತರ ಹಣಕಾಸು ವಿಚಾರದಲ್ಲಿ ಅವ್ಯವಹಾರ ನಡೆಸಲಾಗಿದೆ ಎಂಬ ಆರೋಪ ಕೇಳಿ ಬಂದಿತ್ತು. ಈ ಹಿನ್ನೆಲೆಯಲ್ಲಿ ವಿಧಾನಸಭೆಯ ಸ್ಪೀಕರ್ ಟಿಪ್ಪಣಿ ಹಾಗೂ ವಿಧಾನಸಭೆ ಸಚಿವಾಲಯದ ವಿಶೇಷ ಮಂಡಳಿಯ ಆದೇಶದ ಅನುಸಾರ ಎಸ್. ಮೂರ್ತಿಯನ್ನು ಸೇವೆಯಿಂದ ಅಮಾನತುಗೊಳಿಸಿ 2018ರ ಡಿ.27ರಂದು ಕರ್ನಾಟಕ ವಿಧಾನಸಭೆ ಅಧೀನ ಕಾರ್ಯದರ್ಶಿ ಆದೇಶ ಹೊರಡಿಸಿದ್ದರು.

2